ಬಳ್ಳಾರಿಯ ಲೋಕೋಪಯೋಗಿ ಇಲಾಖೆಯವರು ರೂ. 88,000–00 ಪೆಚ್ಚಿದ ದುರಸ್ತಿ ಕೆಲಸವನ್ನು ಕೈಗೊಂಡಿರುತ್ತಾರೆ.

ಊ) 1989 ರಲ್ಲಿ ಶತಮಾನೋತ್ಸವನ್ನು ಆಚರಿಸುವ ಕುರಿತಾಗಿ ಪ್ರಸ್ತಾವನೆ ಬಂದಿತ್ತು ಆದರೆ ಹಣದ ಕೊರತೆಯಿಂದಾಗಿ ಅದನ್ನು ಪರಿಗಣಿಸಲು ಸಾಧ್ಯವಾಗಲಿಲ್ಲ.

ವಿಷಯ :– ಹರಪನಹಳ್ಳಿ ತಾಲ್ಲೂಕಿನಲ್ಲಿ ಕಪ್ಪು ಹಲಗೆ ಪ್ರಾಥಮಿಕ ಶಾಲೆಗಳ ಜಾರಿ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 592 (988)

ಶ್ರೀ ಬಿ. ಹೆಚ್. ಯಂಕಾನಾಯಕ್ (ಹರಪನಹಳ್ಳಿ) :– ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹರಪನಹಳ್ಳಿ ತಾಲ್ಲೂಕಿನಲ್ಲಿ ಕಪ್ಪುಹಲಗೆ ಪ್ರಾಥಮಿಕ ಶಾಲೆಗಳನ್ನು ಜಾರಿಗೆ ತರಲು ಸರ್ಕಾರ ಯೋಚಿಸಿದೆಯೇ ?

ಆ) ಸದರಿ ತಾಲ್ಲೂಕಿಗೆ 120 ಕಪ್ಪುಹಲಗೆ ಶಾಲೆಗಳು ನಿರ್ಮಿಸಲು ಸರ್ಕಾರ ಆದೇಶ ಕೊಟ್ಟಿದ್ದು ಬರೀ 100 ಕೇಂದ್ರಗಳನ್ನು ನಿರ್ಮಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ ಉಳಿದ ಶಾಲೆಗಳ ನಿರ್ಮಾಣ ಕಾರ್ಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವರೇ ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮಂತ್ರಿಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):–

ಅ) ಹರಪನಹಳ್ಳಿ ತಾಲ್ಲೂಕನ್ನು ಈಗಾಗಲೇ 1988–89 ರಲ್ಲಿ ಕಾರ್ಯಕ್ರಮದ ಮೊದಲನೇ ಹಂತದ ವ್ಯಾಪ್ತಿಗೆ ಒಳಪಡಿಸಲಾಗಿದೆ.

ಆ) ಹರಪನಹಳ್ಳಿ ತಾಲ್ಲೂಕಿಗೆ ಮಂಜೂರಾದ 120 ಶಾಲಾ ಕೊಠಡಿಗಳಲ್ಲಿ 112 ಕೊಠಡಿಗಳ ನಿರ್ಮಾಣ ಕಾರ್ಯ ಮುಗಿದಿದೆ. ಉಳಿದ 8 ಕೊಠಡಿಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ.

ಇ) ಮೇಲೆ ಅ) ದಲ್ಲಿ ಉತ್ತರಿಸಿರುವುದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ :– ಕೊಡಗು ಜಿಲ್ಲೆಯಲ್ಲಿ ಕಪ್ಪು ಹಲಗೆ ಯೋಜನೆಯ ಅಡಿಯಲ್ಲಿ ಮಂಜೂರಾದ ಶಾಲಾ ಕೊಠಡಿಗಳ ಸಂಖ್ಯೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 593 (1034)

ಶ್ರೀಮತಿ ಸುಮಾ ವಸಂತ (ವಿರಾಜಪೇಟೆ) :– ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಕೊಡಗು ಜಿಲ್ಲೆಯಲ್ಲಿ ಕಪ್ಪು ಹಲಗೆ ಯೋಜನೆಯಡಿಯಲ್ಲಿ ಮಂಜೂರಾಗಿರುವ ಶಾಲೆಗಳ ಕೊಠಡಿಗಳ ಸಂಖ್ಯೆ ಎಷ್ಟು ?

ಆ) ಇವುಗಳ ನಿರ್ಮಾಣ ಕಾರ್ಯ ಪೂರ್ಣವಾಗಿದೆಯೇ ?

ಇ) ನಿರ್ಮಾಣ ಕಾರ್ಯ ಪ್ರಾರಂಭವಾಗದಿರುವ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮಂತ್ರಿಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು):–

ಅ) 94.

ಆ) 94 ಕೊಠಡಿಗಳಲ್ಲಿ 71 ಪೂರ್ಣಗೊಂಡಿವೆ.

ಇ) ಇಲ್ಲ.

ಎಲ್ಲಾ ಶಾಲಾ ಕೊಠಡಿಗಳ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದೆ. ನಿರ್ಮಾಣ ಕಾರ್ಯ ಪೂರ್ತಿಗೊಳ್ಳುವ ವಿವಿಧ ಹಂತದಲ್ಲಿದೆ.